ಕುಂದಾಪುರ ತಾಲ್ಲೂಕಿನ ಶಂಕರನಾರಾಯಣ ಪದವಿ ಪೂರ್ವ ಕಾಲೇಜಿಗೆ ಮಂಜೂರಾದ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

658 - ಶ್ರೀ ಕೆ. ಪ್ರತಾಪಚಂದ್ರಶೆಟ್ಟಿ (ಕುಂದಾಪುರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರ ತಾಲ್ಲೂಕಿನ ಶಂಕರನಾರಾಯಣ ಪದವಿಪೂರ್ವ ಕಾಲೇಜಿಗೆ ಮಂಜೂರಾದ ಹುದ್ದೆಗಳೆಷ್ಟು?

ಆ) ಕೊರತೆ ಇರುವ ಹುದ್ದೆಗಳೆಷ್ಟು?

ಇ) ಈ ಕೊರತೆಯನ್ನು ತುಂಬಲು ಸರ್ಕಾರದವರು ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ಮಂಜೂರಾದ ಹುದ್ದೆಗಳ ಸಂಖ್ಯೆ 15

ಆ) ಖಾಲಿ ಇರುವ ಹುದ್ದೆಗಳ ಸಂಖ್ಯೆ 6

ಇ) ಸಾಮಾನ್ಯ ವರ್ಗಾವಣೆ ಸಮಯದಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದು. ಕೆ.ಸಿ.ಎಸ್.ಆರ್ಸ್. ನಿಯಮ 32ರ ಮೇರೆಗೆ ಕಾರ್ಯನಿರ್ವಹಿಸುತ್ತಿದ್ದ 812 ಉಪನ್ಯಾಸಕರಿಗೆ ಇತ್ತೀಚಿಗೆ ಸ್ಥಾನಪನ್ನ ಬಡ್ತಿ ನೀಡಲಾಗಿದ್ದು, ಅವರುಗಳಿಗೆ ಸ್ಥಳ ನಿಯುಕ್ತಿಗೊಳಿಸುವ ಸಮಯದಲ್ಲಿ ಖಾಲಿ ಇರುವ ಉಪನ್ಯಾಸಕ ಹುದ್ದೆಗಳನ್ನು ತುಂಬಲಾಗುವುದು. ಖಾಲಿ ಇರುವ ಪ್ರಿನ್ಸಿಪಲ್ ಹುದ್ದೆಯನ್ನು ಸಧ್ಯದಲ್ಲಿಯೇ ಬಡ್ತಿಯಿಂದ ತುಂಬಲು ಕ್ರಮ ಕೈಗೊಳ್ಳಲಾಗುವುದು.

ದ.ಕನ್ನಡ ಜಿಲ್ಲೆಯ ಜಿಲ್ಲಾ ಪಂಚಾಯಿತಿಯ ಅಧಿಕಾರಿಗಳ ಅವ್ಯವಹಾರ

659 - ಶ್ರೀ ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಜಿಲ್ಲಾ ಪಂಚಾಯಿತಿಯಿಂದ ಕಳೆದ ಮೂರು ವರ್ಷಗಳಿಂದ ಯಾವ ಯಾವ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಮೇಲೆ ಆರ್ಥಿಕ ಅವ್ಯವಹಾರದ ದೂರುಗಳು ಸರ್ಕಾರಕ್ಕೆ ಬಂದಿವೆ (ಹೆಸರು ಹುದ್ದೆ ಮತ್ತು ಯಾವ ಅವ್ಯವಹಾರ ಎಂದು ತಿಳಿಸುವುದು)?

ಆ) ಅವರ ಮೇಲೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಇ) ಎಷ್ಟು ಜನರನ್ನು ಅಮಾನತ್ತಿನಲ್ಲಿಡಲಾಗಿದೆ?

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :